# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Clean Max Theia Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 61.3 ಮೆ.ವ್ಯಾ. ಸಾಮರ್ಥ್ಯದ ಪವನ ಮತ್ತು ಸೌರ ಮಿಶ್ರಿತ ಹೈಬ್ರಿಡ್ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :** 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/08/ CMTL-61.3 MW (36.3 W + 25 S)/Davanagere/F-91/ 2022 2710, ದಿನಾಂಕ:16.12.2022.

2) ದಿನಾಂಕ:21.01.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

3) ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

**ಪ್ರಸ್ತಾವನೆ :-**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್.ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Clean Max Theia Private Limited ಕಂಪನಿಗೆ ದಾವಣಗೆರೆ ಜಿಲ್ಲೆಯ, ಜಗಳೂರು ತಾಲ್ಲೂಕಿನ, ದೊಡ್ಡಬೊಮ್ಮನಹಳ್ಳಿ, ಗೊಲ್ಲರಹಟ್ಟಿ, ಜೋಗಿಹಳ್ಳಿ, ಚಿಕ್ಕಕುಂಬಲ ಕುಂಟ ಮತ್ತು ಕನಮಡಗು ಗ್ರಾಮಗಳಲ್ಲಿ 61.30 ಮೆ.ವ್ಯಾ (36.3 ಮೆ.ವ್ಯಾ ಪವನ + 25 ಮೆ.ವ್ಯಾ ಸೌರ) ಸ್ಥಾಪಿತ ಸಾಮರ್ಥ್ಯದ (36.3 ಮೆ.ವ್ಯಾ. Evacuation ಸಾಮರ್ಥ) ಪವನ ಮತ್ತು ಸೌರ ಮಿಶ್ರಿತ ಹೈಬ್ರಿಡ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್. ನಿಯಮಿತಕ್ಕೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸ್ವಂತ ಬಳಕೆಗೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 4 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

M/s Clean Max Theia Private Limited ಇವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಸದರಿಯವರು 36.3 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ 3.3 ಮೆ.ವ್ಯಾ. ಸಾಮರ್ಥ್ಯದ 11 ವಿಂಡ್ ಟರ್ಬೈನ್‌ಗಳನ್ನು ಅಳವಡಿಸಲು ಪ್ರತಿ ಟರ್ಬೈನ್‌ಗೆ 04 ಎಕರೆಯಂತೆ ಒಟ್ಟು 44 ಎಕರೆ (11 Nos of WTG x 4 Acres = 44 Acres) ಜಮೀನನ್ನು ಟೋಪೋಶೀಟ್ ಸಂಖ್ಯೆ:56 B/6ರಲ್ಲಿ ಹಾಗೂ 25 ಮೆ.ವ್ಯಾ ಸಾಮರ್ಥ್ಯದ ಸೌರ ಘಟಕಗಳನ್ನು ಅಳವಡಿಸಲು ಪ್ರತಿ ಮೆ.ವ್ಯಾ ಸಾಮರ್ಥ್ಯಕ್ಕೆ 3.5 ಎಕರೆಯಂತೆ ಒಟ್ಟು 88 ಎಕರೆ (25 MW x 3.5 Acre = 88 Acres) ಜಮೀನು ಸೇರಿ ಒಟ್ಟು 132 ಎಕರೆ ಜಮೀನನ್ನು ಉಪಯೋಗಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿರುತ್ತಾರೆ.

M/s Clean Max Theia Private Limited ದಿನಾಂಕ:15.05.2022ರಂದು ನೋಂದಾವಣೆಗೊಂಡಿದ್ದು, ಇದರ ನೋಂದಾಯಿತ ಕಚೇರಿಯು ಮಹಾರಾಷ್ಟ್ರದ ಮುಂಬಯಿಯಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯು M/s Clean Max Enviro Energy Solutions Private Limited ಇವರಿಂದ ಸ್ಥಾಪಿತವಾದ SPV ಸಂಸ್ಥೆಯಾಗಿರುತ್ತದೆ. M/s Clean Max Enviro Energy Solutions Private Limited ಕಂಪನಿಯ ನೆಟ್‌ವರ್ತ್ ದಿನಾಂಕ:31.03.2021ರ ಅಂತ್ಯಕ್ಕೆ ರೂ.884.97 ಕೋಟಿಗಳಾಗಿದ್ದು, ಸಮೂಹ ಸ್ವಂತ (Group Captive) ಬಳಕೆ ವರ್ಗದಡಿ ಪರಿಗಣಿಸಲು ಇರುವ ನಿಯಮಗಳಂತೆ M/s Ultratech Cement Limited ಕಂಪನಿಯವರು (RR No.HTP-3, HTP-8 & MHT-42) ಕಂಪನಿಯು ಬಳಸಿಕೊಳ್ಳಲಿದ್ದು, ಸದರಿ ಕಂಪನಿಯು ಶೇ.26ರಷ್ಟು ಷೇರನ್ನು M/s Clean Max Theia Private Limited

ಕಂಪನಿಯಲ್ಲಿ ಹೊಂದಿರುತ್ತದೆ ಹಾಗೂ ಶೇ.51ರಷು ವಿದ್ಯುತ್ತನ್ನು ಸಮೂಹ ಬಳಕೆ ವರ್ಗದಡಿ ಬಳಸಿಕೊಂಡು ಹೆಚ್ಚುವರಿ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೆ.ಆರ್.ಇ.ಡಿ.ಎಲ್. ನಿಯಮಿತವು ತಿಳಿಸಿರುತ್ತಾರೆ.

M/s Clean Max Theia Private Limited ಕಂಪನಿಯು ಹೊಸ ಇಂಧನ ನೀತಿ 2022-27ರಂತೆ 61.3 ಮೆ.ವ್ಯಾ. ಸಾಮರ್ಥ್ಯದ ಯೋಜನೆಗೆ ಅರ್ಜಿ ಹಾಗೂ 30% ಸಂಸ್ಕರಣಾ ಶುಲ್ಕವನ್ನು ಪಾವತಿಸಿರುತ್ತಾರೆ. ಬಾಕಿ ಉಳಿದ 70% ಸಂಸ್ಕರಣಾ ಶುಲ್ಕವನ್ನು ಹಂಚಿಕೆ ಆದೇಶ ಹೊರಡಿಸಿದ ನಂತರ ಕೆ.ಆರ್.ಇ.ಡಿ.ಎಲ್. ನಿಯಮಿತದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪೂರ್ವದಲ್ಲಿ ಸಂದಾಯ ಮಾಡಬೇಕಾಗಿರುತ್ತದೆ.

ಮೇಲೆ ಓದಲಾದ (2)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Clean Max Theia Private Limited ಇವರು ದಾವಣಗೆರೆ ಜಿಲ್ಲೆಯ, ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ State Grid ವರ್ಗದಡಿಯಲ್ಲಿ ಹಂಚಿಕೆ ನೀಡುವಂತೆ ಕೋರಿರುವ 61.3 MW (36.3 ಮೆ.ವ್ಯಾ ಪವನ + 25 ಮೆ.ವ್ಯಾ ಸೌರ) ಸಾಮರ್ಥ್ಯದ ಹೈಬ್ರಿಡ್ (ಪವನ ಮತ್ತು ಸೌರ ಮಿಶ್ರಿತ) ಯೋಜನೆಯ ಸ್ಥಳವು ಖಾಸಗಿ ಜಮೀನಾಗಿರುತ್ತದೆ. ಸದರಿಯವರು ಅಳವಡಿಸುವ ವಿಂಡ್ ಟರ್ಬೈನ್ ಗಳಿಗೆ ಅಕ್ಷಾಂಶ ಮತ್ತು ರೇಖಾಂಶಗಳನ್ನು ನೀಡಿರುತ್ತಾರೆ. ಸದರಿಯವರು 11 ಸಂಖ್ಯೆಯ ವಿಂಡ್ ಟರ್ಬೈನ್‌ಗಳನ್ನು (3300 ಕಿ.ವ್ಯಾ ಸಾಮರ್ಥ್ಯದ ಟರ್ಬೈನ್‌ಗಳು) ಅಳವಡಿಸಲು ಪ್ರತಿ ಟರ್ಬೈನ್‌ಗೆ 04 ಎಕರೆಯಂತೆ ಒಟ್ಟು 44 ಎಕರೆ (11 Nos of WTG x 4 Acres = 44 Acres) ಜಮೀನನ್ನು ಹಾಗೂ 25 ಮೆ.ವ್ಯಾ ಸಾಮರ್ಥ್ಯದ ಸೌರ ಘಟಕಗಳನ್ನು ಅಳವಡಿಸಲು ಪ್ರತಿ ಮೆ.ವ್ಯಾ ಸಾಮರ್ಥ್ಯಕ್ಕೆ 3.5 ಎಕರೆಯಂತೆ ಒಟ್ಟು 88 ಎಕರೆ (25 MW x 3.5 Acre = 88 Acres) ಜಮೀನು ಸೇರಿ ಒಟ್ಟು 132 ಎಕರೆ (44 Acre + 88 Acre =132 Acres) ಜಮೀನನ್ನು ಮಾತ್ರ ಹೈಬ್ರಿಡ್ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಟೋಪೋಶೀಟ್ ಸಂಖ್ಯೆ: 57B/6 ರಲ್ಲಿ ಉಪಯೋಗಿಸಿಕೊಳ್ಳಬಹುದಾಗಿದೆ. ಸದರಿಯವರು 61.3 ಮೆ.ವ್ಯಾ (36.3 ಮೆ.ವ್ಯಾ ಪವನ + 25 ಮೆ.ವ್ಯಾ ಸೌರ) ಸಾಮರ್ಥ್ಯದಿಂದ ಉತ್ಪಾದಿಸುವ ವಿದ್ಯುತ್ತನ್ನು State Grid ವರ್ಗದಡಿಯಲ್ಲಿ KPTCL 400/220/11kV Hiremallanahole ಸಬ್-ಸ್ಟೇಷನ್‌ಗೆ evacuate ಮಾಡುವುದಾಗಿ ತಿಳಿಸಿರುತ್ತಾರೆ.

ಆದರೆ ನಿರ್ದೇಶಕರು (ತಾಂತ್ರಿಕ), ಕೆಪಿಟಿಸಿಎಲ್ ಇವರು ಸದರಿ ಯೋಜನೆಗೆ Hiremallanahole ಸಬ್-ಸ್ಟೇಷನ್‌ನಲ್ಲಿ 3 ನೇ 500MVA ಟ್ರಾನ್ಸ್‌ಫಾರ್ಮರನ್ನು ಅನುಷ್ಠಾನಗೊಳಿಸಿದ ನಂತರ ನೀಡಬಹುದಾಗಿದೆ ಎಂದು ತಿಳಿಸಿದರು. ಸಮಿತಿಯು ಸದರಿ ಯೋಜನೆಗೆ Evacuation ನ್ನು 400/220/11kV Hiremallanahole ಸಬ್-ಸ್ಟೇಷನ್‌ಗೆ ಅಥವಾ ಲಭ್ಯವಿರುವ ಸಬ್-ಸ್ಟೇಷನ್‌ಗೆ Evacuation ನೀಡಲು KPTCL ನಿಯಮಿತಕ್ಕೆ ಕ್ರಮ ಕೈಗೊಳ್ಳಲು ತಿಳಿಸುತ್ತಾ, ಈ ಕೆಳಕಂಡ ಷರತ್ತುಗಳಿಗೊಳಪಟ್ಟು, M/s Clean Max Theia Private Limited ಇವರಿಗೆ ದಾವಣಗೆರೆ ಜಿಲ್ಲೆಯ, ಜಗಳೂರು ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 61.3 ಮೆ.ವ್ಯಾ. ಸಾಮರ್ಥ್ಯದ ಪವನ ಮತ್ತು ಸೌರ ಮಿಶ್ರಿತ ಹೈಬ್ರಿಡ್ ವಿದ್ಯುತ್ ಯೋಜನೆಯನ್ನು ಹಂಚಿಕೆ ನೀಡಲು ಸಮಿತಿಯು ಸರ್ವಾನುಮತಿಯಿಂದ ಶಿಫಾರಸ್ಸು ಮಾಡಿರುತ್ತದೆ.

i. ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ ನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸಮೂಹ ಸ್ವಂತ ಬಳಕೆ (Group Captive)/ಮೂರನೇ ವ್ಯಕ್ತಿಗೆ ಮಾರಾಟ ಮಾಡಲು.

ii. ಸದರಿ ಯೋಜನೆಗೆ 400/220/11kV Hiremallanahole ಸಬ್-ಸ್ಟೇಷನ್‌ಗೆ ಅಥವಾ evacuation ಲಭ್ಯವಿರುವ ಸಬ್-ಸ್ಟೇಷನ್‌ಗಳಿಗೆ KPTCL ನಿಯಮಿತದಿಂದ evacuation ಅನುಮತಿ ಪಡೆದು ಅನುಷ್ಠಾನಗೊಳಿಸುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.

iii. ಈಗಾಗಲೇ ಇತರೆ ಅಭಿವೃದ್ಧಿದಾರರುಗಳು ಹಂಚಿಕೆ/ತಾತ್ವಿಕ ಅನುಮೋದನೆಯನ್ನು ಪಡೆದಿರುವ ಪ್ರದೇಶದಲ್ಲಿ ಪ್ರಸ್ತಾಪಿತ ಯೋಜನೆಯ WTG Co-ordinates Overlap ಆಗಿದ್ದಲ್ಲಿ, ಅಂತಹ WTGs ಸಾಮರ್ಥ್ಯವು ರದ್ದುಗೊಳ್ಳುತ್ತದೆ.